ಕರ್ನಾಟಕ ಸರ್ಕಾರ

ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ 01 ಇಎಸ್‌ಟಿ 4 (ಬಿ) 2016 /2516

ನಿರ್ದೇಶಕರವರ ಕಛೇರಿ
ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ
ಅರಮನೆ ರಸ್ತೆ, ಬೆಂಗಳೂರು-560001
ದಿನಾಂಕ: 13.12.2017

## ಸುತ್ತೋಲೆ

ವಿಷಯ: ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳನ್ನು ಅನಿರ್ದಿಷ್ಟ ಅವಧಿಯವರೆಗೆ ಅಮಾನತ್ತಿನಲ್ಲಿರಿಸುತ್ತಿರುವ, ಜೀವನಾಧಾರ ಭತ್ಯೆಯನ್ನು ನೀಡದಿರುವ ಹಾಗೂ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಸರ್ಕಾರ ಮತ್ತು ಸಚಿವರುಗಳಿಗೆ ನೇರವಾಗಿ ಮನವಿಗಳನ್ನು ಸಲ್ಲಿಸುತ್ತಿರುವ ಬಗ್ಗೆ.

*-*-*-*-*

ವಿಷಯಕ್ಕೆ ಸಂಬಂಧಿಸಿದಂತೆ, ತಾಂತ್ರಿಕ ಶಿಕ್ಷಣ ಇಲಾಖೆಯ ಅನುದಾನಿತ ಇಂಜಿನಿಯರಿಂಗ್ ಕಾಲೇಜು/ಪಾಲಿಟೆಕ್ನಿಕ್‌ಗಳ ಹಲವು ಸಿಬ್ಬಂದಿಗಳು ಸೌಲಭ್ಯಗಳ ಮಂಜೂರಾತಿ ಮತ್ತು ಇತರೆ ವಿಷಯಗಳ ಬಗ್ಗೆ ಸರ್ಕಾರಕ್ಕೆ ಮತ್ತು ಮಾನ್ಯ ಸಚಿವರುಗಳಿಗೆ ನೇರವಾಗಿ ಮನವಿ ಸಲ್ಲಿಸುತ್ತಿರುವುದು ಮತ್ತು ಶಿಫಾರಸ್ಸು ಪತ್ರಗಳನ್ನು ನೀಡುತ್ತಿರುವುದು ಕಂಡು ಬಂದಿರುತ್ತದೆ. ಅಲ್ಲದೆ ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳ ಅಮಾನತು ಅವಧಿಯನ್ನು 6 ತಿಂಗಳುಗಳಿಗಿಂತ ಹೆಚ್ಚಿನ ಅವಧಿಗೆ ಮುಂದುವರೆಸುತ್ತಿರುವುದು ತಾಂತ್ರಿಕ ಶಿಕ್ಷಣ ನಿರ್ದೇಶನಾಲಯದ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಕೆಳಕಂಡ ನಿಯಮಗಳನ್ನು ಪಾಲಿಸುವ ಬಗ್ಗೆ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಅನುದಾನಿತ ಶಿಕ್ಷಣ ಸಂಸ್ಥೆಗಳ ಆಡಳಿತ ಮಂಡಳಿಗಳು ಮತ್ತು ಸಂಸ್ಥೆಯ ಪ್ರಾಂಶುಪಾಲರು ಕ್ರಮ ಕೈಗೊಳ್ಳಬೇಕಾಗಿರುತ್ತದೆ.

- ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 1966 ರ ನಿಯಮ 26 ರನ್ವಯ ಯಾರೇ ನೌಕರನು ಸರ್ಕಾರದ ಅಧೀನದಲ್ಲಿ **ತನ್ನ ಸೇವೆಗೆ ಸಂಬಂಧಿಸಿದ ವಿಷಯಗಳ ಸಂಬಂಧದಲ್ಲಿ** ಅವನ ಹಿತಾಸಕ್ತಿಗಳನ್ನು ಸಾಧಿಸಿಕೊಳ್ಳಲು **ಯಾರೇ ವರಿಷ್ಠ ಅಧಿಕಾರಿಯ ಮೇಲೆ ಯಾವುದೇ ರಾಜಕೀಯ ಅಥವಾ ಇತರ ಪ್ರಭಾವವನ್ನು ತರತಕ್ಕದ್ದಲ್ಲ ಅಥವಾ ತರಲು ಪ್ರಯತ್ನಿಸತಕ್ಕದ್ದಲ್ಲ** ಹಾಗೂ ನಿಯಮ 27 ರನ್ವಯ **ನೌಕರನು ಯಾವುದೇ ಮನವಿಯನ್ನು ತನ್ನ ಮೇಲಧಿಕಾರಿಯ ಮೂಲಕ ಮಾತ್ರ ಸಲ್ಲಿಸತಕ್ಕದ್ದು.**
- ಇದಲ್ಲದೆ, ಸದರಿ ನಿಯಮಗಳ ನಿಯಮ 9(i) ರನ್ವಯ ಯಾರೇ ನೌಕರನು, ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆದ ಹೊರತು, **ಯಾವುದೇ ವೃತ್ತ ಪತ್ರಿಕೆ ಅಥವಾ ಇತರ ನಿಯತಕಾಲಿಕ ಪ್ರಕಟಣೆಯ** ಪೂರ್ಣ ಅಥವಾ ಭಾಗಶಃ ಒಡೆತನವನ್ನು ಹೊಂದಿರತಕ್ಕದ್ದಲ್ಲ ಅಥವಾ ಅವುಗಳ **ಸಂಪಾದನಾ ಕಾರ್ಯ ಅಥವಾ ವ್ಯವಸ್ಥಾಪನಾ ಕಾರ್ಯಮಾಡತಕ್ಕದ್ದಲ್ಲ ಅಥವಾ ಅವುಗಳಲ್ಲಿ ಭಾಗವಹಿಸತಕ್ಕದ್ದಲ್ಲ.**
- ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳ (ಶಿಸ್ತು ಮತ್ತು ನಿಯಂತ್ರಣ) ನಿಯಮಗಳು 1978ರ ನೀತಿ ಸಂಹಿತೆ ನಿಯಮ 29 (xviii) ರನ್ವಯ (organize or attend any meeting during the working hours of the Institution except when he is required or permitted by the head of the institution to do so) ಕರ್ತವ್ಯದ ಅವಧಿಯಲ್ಲಿ ಸಂಸ್ಥೆಯ ಮುಖ್ಯಸ್ಥರ ಪೂರ್ವಾನುಮತಿಯನ್ನು ಪಡೆಯದೆ ಯಾವುದೇ ಸಭೆಗಳನ್ನು ಆಯೋಜಿಸುವಂತಿಲ್ಲ ಮತ್ತು ಸಭೆಗಳಿಗೆ ಹಾಜರಾಗುವಂತಿಲ್ಲ.
- ಕೆ.ಸಿ.ಎಸ್.ಆರ್. ನಿಯಮ 98 (1) (ಎ) & (ಬಿ) ರನ್ವಯ ಅಮಾನತಿನಲ್ಲಿರುವ ನೌಕರನಿಗೆ ಜೀವನಾಧಾರ ಭತ್ಯೆಯನ್ನು ನೀಡಬೇಕಾಗಿರುತ್ತದೆ ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ-1983 ರ ನಿಯಮ 92 (3) (ಬಿ) ರ ಪ್ರಕಾರ ಅಮಾನತಿನ ಅವಧಿಯು 06 ತಿಂಗಳಗಿಂತ ಹೆಚ್ಚಿನ ಅವಧಿಗೆ

ಮುಂದುವರೆಯುವಂತಿಲ್ಲ, ಒಂದು ವೇಳೆ ವಿಚಾರಣೆಯು ಪೂರ್ಣಗೊಂಡಿರದಿದ್ದಲ್ಲಿ ಅಮಾನತ್ತನ್ನು 06 ತಿಂಗಳಗಿಂತ ಹೆಚ್ಚಿನ ಅವಧಿಗೆ ಮುಂದುವರೆಸುವ ಬಗ್ಗೆ ಸಕ್ಷಮ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ ಅನುಮತಿ ಪಡೆಯಬೇಕಾಗಿರುತ್ತದೆ.

ಮೇಲ್ಕಂಡ ನಿಯಮಗಳನ್ನು ಎಲ್ಲಾ ನೌಕರರುಗಳು ಮತ್ತು ಆಡಳಿತ ಮಂಡಳಿಯು ಪಾಲಿಸತಕ್ಕದ್ದು ಹಾಗೂ ಈ ನಿಯಮಗಳನ್ನು ಉಲ್ಲಂಘಿಸಿದವರ ವಿರುದ್ಧ ಆಡಳಿತ ಮಂಡಳಿಯು ಶಿಸ್ತಿನ ಕ್ರಮ ಕೈಗೊಳ್ಳತಕ್ಕದ್ದು, ಇಲ್ಲವಾದಲ್ಲಿ ಈ ಸಂಬಂಧವಾಗಿ ಆಡಳಿತ ಮಂಡಳ ಮತ್ತು ಸಂಸ್ಥೆಯ ಪ್ರಾಂಶುಪಾಲರೇ ಹೊಣೆಗಾರರಾಗಿರುತ್ತಾರೆ.

ನಿರ್ದೇಶಕರು
ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ:

1. ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಆಡಳಿತ ಮಂಡಳಿಯ ಕಾರ್ಯದರ್ಶಿ/ಅಧ್ಯಕ್ಷರುಗಳು
2. ಎಲ್ಲಾ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು ಮತ್ತು ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳಿಗೆ (ಮಾಹಿತಿಗಾಗಿ ಹಾಗೂ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು).

ಪ್ರತಿ:

1. ನಿರ್ದೇಶಕರ ಆಪ್ತ ಶಾಖೆಗೆ.
2. ಇ-ಆಡಳಿತ ವಿಭಾಗಕ್ಕೆ (ಇಲಾಖಾ ಜಾಲತಾಣದಲ್ಲಿ ಪ್ರಕಟಿಸಲು).

*-*-*-*